# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 308

ಸದಸ್ಯರ ಹೆಸರು : ಶ್ರೀ ಆರ್.ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 04-03-2020

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ಎಲ್ಲಾ ಗ್ರಾಮಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರು ಆಗಿದೆಯೇ; ಸ್ಮಶಾನಗಳು ಇಲ್ಲದಿದ್ದಲ್ಲಿ, ಸ್ಮಶಾನಕ್ಕೆ ಜಾಗವನ್ನು ಕಾಯ್ದಿರಿಸಿರುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಶಿವಮೊಗ್ಗ ಜಿಲ್ಲೆಯ ಒಟ್ಟು 471 ಗ್ರಾಮಗಳಲ್ಲಿ ಸ್ಮಶಾನ ಭೂಮಿಗಾಗಿ ಸರ್ಕಾರಿ ಜಮೀನನ್ನು ಕಾಯ್ದಿರಿಸಲಾಗಿದೆ. ರುದ್ರಭೂಮಿ ಇಲ್ಲದಿರುವ ಒಟ್ಟು 331 ಗ್ರಾಮಗಳಲ್ಲಿ ಸ್ಮಶಾನಕ್ಕಾಗಿ ಸರ್ಕಾರಿ ಜಮೀನನ್ನು ಗುರುತಿಸಲಾಗಿದೆ. 10 ಗ್ರಾಮಗಳಲ್ಲಿ ಸ್ಮಶಾನಕ್ಕಾಗಿ ಖಾಸಗಿ ಜಮೀನನ್ನು ಖರೀದಿಸಲು ಉದ್ದೇಶಿಸಲಾಗಿದೆ. ಬಾಕಿ ಉಳಿದಿರುವ 202 ಗ್ರಾಮಗಳಲ್ಲಿ ಸ್ಮಶಾನದ ಉದ್ದೇಶಕ್ಕಾಗಿ ಜಮೀನನ್ನು ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.<br><br>ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ಒಟ್ಟು 299 (ಹೊನ್ನಾಳಿ ತಾಲ್ಲೂಕು-97 ಗ್ರಾಮಗಳು ಮತ್ತು ಚನ್ನಗಿರಿ ತಾಲ್ಲೂಕು-202 ಗ್ರಾಮಗಳು) ಗ್ರಾಮಗಳ ಪೈಕಿ 274 ಗ್ರಾಮಗಳಲ್ಲಿ ಸ್ಮಶಾನ ಭೂಮಿ ಲಭ್ಯವಿದ್ದು, ಉಳಿದ 25 ಗ್ರಾಮಗಳಲ್ಲಿ ಸ್ಮಶಾನ ವ್ಯವಸ್ಥೆ ಕಲ್ಪಿಸಲು ಪ್ರಸ್ತಾವನೆಗಳು ಪರಿಶೀಲನೆಯ ಹಂತದಲ್ಲಿವೆ.<br><br>2019-20ನೇ ಸಾಲಿನ ಆಯವ್ಯಯದ ಘೋಷಣೆಯಂತೆ, ರಾಜ್ಯದಲ್ಲಿ ಸ್ಮಶಾನದ ಉದ್ದೇಶಕ್ಕಾಗಿ ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆಗಳಲ್ಲಿ ಖಾಸಗಿಯವರಿಂದ ಜಮೀನನ್ನು ಖರೀದಿಸಿ, ಕಾಯ್ದಿರಿಸಲು ಒಟ್ಟಾರೆ ರೂ.200.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಿದ್ದು, ಈ ಪೈಕಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಿಗೆ ತಲಾ ರೂ.25.00 ಲಕ್ಷಗಳನ್ನು ಮೊದಲ ಹಂತದಲ್ಲಿ ಅನುದಾನವಾಗಿ ಬಿಡುಗಡೆ ಮಾಡಲಾಗಿದೆ. |
| ಆ) | ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕ ಸ್ಮಶಾನ ಮಂಜೂರಾಗಿದ್ದು, ಸ್ಮಶಾನ ಜಾಗ ಗುರುತಿಸಲು ಸರ್ಕಾರಕ್ಕಿರುವ ಅಡೆತಡೆಗಳೇನು; | ಗ್ರಾಮ ಪಂಚಾಯಿತಿಗಳಲ್ಲಿ ಸ್ಮಶಾನ ಜಾಗ ಗುರುತಿಸಲು ಅಡೆತಡೆಗಳಿರುವುದು ಕಂಡುಬಂದಿರುವುದಿಲ್ಲ. |
| ಇ) | ಸ್ಮಶಾನಗಳ ಅಭಿವೃದ್ಧಿಗೆ ರಸ್ತೆ, ನೀರು, ದೀಪದ ವ್ಯವಸ್ಥೆ ಮತ್ತು ಕಾಂಪೌಂಡ್ ವ್ಯವಸ್ಥೆಗಳನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಸ್ಮಶಾನಗಳಲ್ಲಿನ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾಗುತ್ತಿರುವ ಅನುದಾನಗಳನ್ನು ಉಪಯೋಗಿಸಿಕೊಂಡು ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. |

**ಸಂಖ್ಯೆ: ಆರ್‌ಡಿ 02 ಎಲ್‌ಜಿಕ್ಯೂ 2020**

(ಆರ್.ಅಶೋಕ)
ಕಂದಾಯ ಸಚಿವರು